ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ನ್ಯಾಯಬೆಲೆ ಅಂಗಡಿಗಳನ್ನು ಗಣಕೀಕರಣಗೊಳಿಸುವ ಕುರಿತು

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1033 (1249) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಎಲ್ಲಾ ನ್ಯಾಯಬೆಲೆ ಅಂಗಡಿಗಳನ್ನು ಗಣಕೀಕರಣಗೊಳಿಸಲಾಗಿದೆಯೇ ; ಹಾಗಿದ್ದಲ್ಲಿ, ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು ;

(ಆ) ರಾಜ್ಯದಲ್ಲಿ ನ್ಯಾಯಬೆಲೆ ಅಂಗಡಿಯನ್ನು ಗಣಕೀಕರಣಗೊಳಸುವ ಜೊತೆಗೆ ಇ-ಪಡಿತರ, ಚೀಟಿ ಹಂಚಿಕೆ, ಇ-ಸ್ಥಿತಿ, ಎನ್.ಎಂ.ಎನ್. ಸೇವೆ, ಸಾರ್ವಜನಿಕರ ದೂರು ಇತ್ಯಾದಿಗಳನ್ನು ಇ-ಸೇವೆಗಳ ಮೂಲಕ ಪೂರೈಸಲು ಯಾವ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ; (ಪೂರ್ಣ ಮಾಹಿತಿ ನೀಡುವುದು)

(ಇ) ರಾಷ್ಟ್ರೀಯ ಆಹಾರ ಭದ್ರತೆ ಕಾಯ್ದೆ ಅಡಿ ಫಲಾನುಭವಿಗಳಿಗೆ ನೇರವಾಗಿ ಆಹಾರ ಸಹಾಯ ಧನ ವಿತರಣೆ (Direct Benefit Cash Transfer of food Subsidy under NFSA) ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರಕ್ಕೆ ರಾಜ್ಯವನ್ನು ಆಯ್ಕೆ ಮಾಡಲಾಗಿದೆಯೇ ? (ಮಾಹಿತಿ ನೀಡುವುದು)